ಶ್ರೀ ಎಂ.ವೈ.ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು):

1.ಇಲ್ಲ

2. ಇಂತಹ ಪ್ರಕರಣಗಳು ಯಾವುದೂ ಇರುವುದಿಲ್ಲ

3. ಉದ್ಭವಿಸುವುದಿಲ್ಲ.

ಬೆಳಗಾಂವ ಜಿಲ್ಲೆ ಸವದತ್ತಿ ತಾಲ್ಲೂಕಿನ ಹೊಸೂರು ಗ್ರಾಮದಲ್ಲಿ ಸ್ವತಂತ್ರ ಪದವಿ ಪೂರ್ವ ಮಹಾವಿದ್ಯಾಲಯವನ್ನು ಪ್ರಾರಂಭಿಸುವ ಕುರಿತು

718 (951) ಶ್ರೀ ಕೌಜಲಗಿ ಮಹಂತೇಶ ಶಿವಾನಂದ (ಬೈಲಹೊಂಗಲ): ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟು ಉತ್ತರಿಸುವರೆ?

ಅ) ಬೆಳಗಾಂಜಿಲ್ಲೆ ಸವದತ್ತಿ ತಾಲ್ಲೂಕಿನ ಹೊಸೂರ ಗ್ರಾಮದಲ್ಲಿ ಸ್ವತಂತ್ರ ಪದವಿ ಪೂರ್ವ ಮಹಾ ವಿದ್ಯಾಲಯ ಇಲ್ಲದೆ ಇರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ವಿದ್ಯಾರ್ಥಿಗಳ ಅನುಕೂಲತೆಗಾಗಿ ಬೆಳಗಾಂ ಜಿಲ್ಲೆ ಸವದತ್ತಿ ತಾಲ್ಲೂಕಿನ ಹೊಸೂರ ಗ್ರಾಮದಲ್ಲಿ ಸರ್ಕಾರಿ ಸ್ವತಂತ್ರ ಪದವಿ ಪೂರ್ವ ಮಹಾ ವಿದ್ಯಾಲಯ (ಇಂಡಿಪೆಂಡೆಂಟ್ ಜೂನಿಯರ್ ಕಾಲೇಜು) ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ಹೆಚ್.ವಿಶ್ವನಾಥ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು):

ಅ) ಸವದತ್ತಿ ತಾಲ್ಲೂಕಿನಲ್ಲಿ ಅಗತ್ಯವಿರುವಷ್ಟು ಸರ್ಕಾರ ಹಾಗೂ ಅನುದಾನಿತ ಪದವಿ ಪೂರ್ವ ಕಾಲೇಜುಗಳಿವೆ. ಇದರಿಂದ ಹೊಸೂರು ಗ್ರಾಮಕ್ಕೆ ಪ್ರತ್ಯೇಕವಾಗಿ ಸರ್ಕಾರಿ ಸ್ವತಂತ್ರ್ಯ ಪದವಿ ಪೂರ್ವ ಕಾಲೇಜಿನ ಅವಶ್ಯಕತೆ ಕಂಡು ಬರುವುದಿಲ್ಲ.

ರಾಜ್ಯದಲ್ಲಿ ಹೊಸ ಸರ್ಕಾರಿ ಪ್ರೌಢ ಶಾಲೆಗಳನ್ನು ಪ್ರಾರಂಭಿಸುವುದು

720 (954) ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ): ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. ರಾಜ್ಯದಲ್ಲಿ ಈ ವರ್ಷ ಎಷ್ಟು ಹೊಸ ಸರ್ಕಾರಿ ಪ್ರೌಢ ಶಾಲೆಗಳನ್ನು ಪ್ರಾರಂಭಿಸಲು ಸರ್ಕಾರ ಉದ್ದೇಶಿಸಲಾಗಿದೆ?

2. ಸರ್ಕಾರಿ ಪ್ರೌಢ ಶಾಲೆಗಳನ್ನು ಪ್ರಾರಂಭಿಸುವಾಗ ಬೆಳಗಾವ್ ಜಿಲ್ಲೆ, ಬೈಲಹೊಂಗಲ ತಾಲ್ಲೂಕಿನ ಅನಿಗೋಳ ಗ್ರಾಮದಲ್ಲಿ ಮತ್ತು ಬೆಳಗಾಂವ್ ಜಿಲ್ಲೆ ಸವದತ್ತಿ ತಾಲ್ಲೂಕಿನ ಮಲ್ಲೂರು ಗ್ರಾಮದಲ್ಲಿ ಸರ್ಕಾರಿ ಪ್ರೌಢಶಾಲೆಗಳನ್ನು ಪ್ರಾರಂಭಿಸಲು ಪರಿಶೀಲಿಸಲಾಗುವುದುದೇ?

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

1. 17 ಸರ್ಕಾರಿ ಪ್ರೌಢ ಶಾಲೆಗಳನ್ನು ಮಂಜೂರು ಮಾಡಲಾಗಿದೆ (ಪಟ್ಟಿ ಲಗತ್ತಿಸಿದೆ)

2. ಸದ್ಯಕ್ಕೆ ಇಲ್ಲ.